ಸಂಪುಟ : 8 ಸಂಚಿಕೆ : 216 ಪುಟ : 4 ಬೆಲೆ : 3.00 ಸೋಮವಾರ ಅಕ್ಟೋಬರ್ 02, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 216 Pages : 4 Price : 3.00 Monday October 02, 2023 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ರಾಜ್ಯೋತ್ಸವ ಪ್ರಶಸ್ತಿ ನಾಮನಿರ್ದೇಶನ ಅಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕೊಡಮಾಡುವ 2023ನೇ ಸಾಲಿನ ಪ್ರತಿಷ್ಠಿತ ರಾಜ್ಯೋತ್ಸವ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳ ಸಾಧಕರ ಹೆಸರುಗಳನ್ನು ಶಿಫಾರಸ್ಸು ಮಾಡಲು ಸಾರ್ವಜನಿಕರಿಂದ ನಾಮನಿರ್ದೇಶನ ಆಹ್ವಾನಿಸಿದೆ.

ನಾಮನಿರ್ದೇಶನದ ಅವಧಿಯು ಅಕ್ಟೋಬರ್ 1 ರಿಂದ 15ರ ವರೆಗೆ ಇದ್ದು, ಸಾರ್ವಜನಿಕರು ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ಮೂಲಕ ಸಲ್ಲಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹೀರೆಮಠ ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ನೂರು ವರ್ಷ ತುಂಬಿದ ಮತದಾರರಿಗೆ ಗೌರವ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಹಿನ್ನಲೆಯಲ್ಲಿ ಜಿಲ್ಲಾಡಳಿತದಿಂದ ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್ ಅವರು ನೂರು ವರ್ಷ ದಾಟಿದ ಹಿರಿಯ ಮತದಾರರ ಮನೆಗೆ ತೆರಳಿ, ಅಭಿನಂದನಾ ಪತ್ರ, ಶಾಲು, ಹಾರ ಮತ್ತು ಫಲ ಪುಷ್ಪ ನೀಡಿ, ಗೌರವಿಸಿದರು.

ಭಾನುವಾರ ಬೆಳಿಗ್ಗೆ ಬೆಟಗೇರಿ ನಗರದ ಹೆಲ್ತ್ ಕ್ಯಾಂಪ್ ನಿವಾಸಿಯಾದ ಶತಾಯುಷಿ ಕಮಲಾಬಾಯಿ ಜೋಶಿ ಅವರನ್ನು ಜಿಲ್ಲಾಧಿಕಾರಿಗಳಾದ ವೈಶಾಲಿ ಎಂ. ಎಲ್ ಅವರು ಸನ್ಮಾನಿಸಿ, ಗೌರವಿಸಿದರು.

ಹಿರಿಯ ನಾಗರಿಕರ ಯೋಗಕ್ಷೇಮ ವಿಚಾರಿಸಿದ ಅವರು, ಸರ್ಕಾರದ ಸೌಲಭ್ಯಗಳನ್ನು ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ಯುವ ಮತದಾರರಿಗೆ ಹಿರಿಯ ನಾಗರಿಕರು ಮಾದರಿಯಾಗಿದ್ದಾರೆ.

ಜಿಲ್ಲೆಯ ಶತಾಯುಷಿ ಎಲ್ಲ ಮತದಾರರನ್ನು ಗೌರವಿಸಿ ಸನ್ಮಾನಿಸಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಶ್ರೀನಿವಾಸ ಮೂರ್ತಿ ಕುಲಕರ್ಣಿ ಸೇರಿದಂತೆ ಸನ್ಮಾನಿತರ ಕುಟುಂಬ ಸದಸ್ಯರು ಇದ್ದರು.



'ವಿಶ್ವ ಹಿರಿಯ ನಾಗರಿಕ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಎಚ್.ಕೆ ಪಾಟೀಲ

# ಹಿರಿಯರನ್ನು ಗೌರವಿಸುವುದು ನಮ್ಮ ನಾಡಿನ ಸಂಸ್ಕೃತಿ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವಸಂಸ್ಥೆಯ ಘೋಷವಾಕ್ಯ 'ತಲೆಮಾರುಗಳಿಂದ ಹಿರಿಯ ನಾಗರಿಕರಿಗಾಗಿ ಸಾರ್ವತ್ರಿಕವಾಗಿ ಘೋಷಿಸಲಾದ ಮಾನವ ಹಕ್ಕುಗಳ ಭರವಸೆಗಳನ್ನು ಈಡೇರಿಸುವುದು' ಎಂಬುದಾಗಿದೆ. ಅದನ್ನು ಗದಗ ಜಿಲ್ಲೆಯಲ್ಲಿ ಸಮರ್ಪಕವಾಗಿ ಜಾರಿಗೊಳಿಸಲಾಗುವುದು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜ ಸೇವೆ, ಕೃಷಿ, ತರಬೇತಿ, ಶಾಂತಿ, ಸಾಹಿತ್ಯ, ಶಿಕ್ಷಣ ಕ್ಷೇತ್ರಗಳಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಗುರುತಿಸಿ 22 ಹಿರಿಯ ನಾಗರಿಕರನ್ನು ಗೌರವಿಸಿ ಸನ್ಮಾನಿಸಲಾಯಿತು. ಹಿರಿಯ ನಾಗರಿಕರಿಗೆ ಏರ್ಪಡಿಸಲಾಗಿದ್ದ ಸಾಂಸ್ಕೃತಿಕ ಹಾಗೂ ಕ್ರೀಡಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣಪತ್ರ, ನೆನಪಿನ ಕಾಣಿಕೆ ನೀಡಿ ಗೌರವ ಸಲ್ಲಿಸಲಾಯಿತು.

ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ರವಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗದಗ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಗೂ ಜಿಲ್ಲೆಯ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವಾನಿರತ ಸ್ವಯಂ ಸೇವಾ ಸಂಸ್ಥೆ ಮತ್ತು ಸಂಘಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 'ವಿಶ್ವ ಹಿರಿಯ ನಾಗರಿಕರ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು.

ಹಿರಿಯ ನಾಗರಿಕರನ್ನು ಗೌರವಿಸುವುದು, ರಕ್ಷಿಸುವುದು, ಪ್ರೀತಿ ವಾತ್ಸಲ್ಯ ತೋರುವ ಮೂಲಕ ಅವರ ಆಶೀರ್ವಾದ ಪಡೆಯುವುದು ನಮ್ಮ ನಾಡಿನ ಸಂಸ್ಕೃತಿಯಾಗಿದೆ. ಹಿರಿಯ ನಾಗರಿಕರ ಬದುಕು ಜೀವನ ಸದಾ ಸಂತೋಷವಾಗಿರಬೇಕು. ಈ ನಿಟ್ಟಿನಲ್ಲಿ ಗದುಗಿನಲ್ಲಿ ಉದ್ಯಾನವನಗಳಲ್ಲಿ ಉದಯರಾಗ, ಸಂಧ್ಯಾ ರಾಗ ಎಂಬ ವಿನೂತನ ಸಂಗೀತ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಹಿರಿಯ ನಾಗರಿಕರು ಬೆಳಿಗ್ಗೆ ಹಾಗೂ ಸಾಯಂಕಾಲ ವಾಯುವಿಹಾರಕ್ಕೆ ಆಗಮಿಸಿದಾಗ ಸುಮಧುರ ಸಂಗೀತವನ್ನು ಆಲಿಸಿ, ಮನಸ್ಸನ್ನು ಉಲ್ಲಾಸಭರಿತ ಮಾಡಿಕೊಳ್ಳಬೇಕು ಎಂದರು. ವೇದಿಕೆಯಲ್ಲಿ ಪ್ರಕಾಶ್ ಉಪನಾಳ, ಬಿ.ಎಂ ಬೆಳೆಯಲಿ, ಕೆ.ಎಚ್ ಬೇಲೂರು, ಬಿ.ಬಿ ಹೂಗಾರ, ಬಸವರಾಜ್ ತೋಟಗೇರ, ಜಿ.ಬಿ ಮಾಲಗತ್ತಿಮಠ, ಎ.ಎನ್ ಬಸ್ತಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ರಾಧಾ ಮಣ್ಣೂರ ಹಾಜರಿದ್ದರು.



> ನಗರದಲ್ಲಿ ಭೀಷ್ಮ ಕೆರೆಯ ಬಸವೇಶ್ವರ ಉದ್ಯಾನವನ ಸೇರಿದಂತೆ ಹಲವಾರು ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲಾಗಿದೆ. ನಾಗರಿಕರು ನೆಮ್ಮದಿಯಿಂದ, ಶಾಂತಿಯಿಂದ, ಸಹಬಾಳ್ವೆಯಿಂದ ಜೀವನ ನಡೆಸಲು ಇವುಗಳು ನೆರವಾಗಲಿ. ಹಿರಿಯ ನಾಗರಿಕರ ನೈತಿಕ ಬಲ ಕಡಿಮೆಯಾಗದಂತೆ ಹಾಗೂ ಅವರು ನೀಡುವ ಮಾರ್ಗದರ್ಶನದಂತೆ ಮೌಲ್ಯಗಳನ್ನು ಬಲವರ್ಧನೆ ಮಾಡೋಣ.
>
> **– ಡಾ. ಎಚ್.ಕೆ ಪಾಟೀಲ.**
> ಸಚಿವರು.


ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಅತಿಥಿಗಳನ್ನು ಸ್ವಾಗತಿಸಿದರು. ಕೆ.ರತ್ನ ಕಾರ್ಯಕ್ರಮ ನಿರ್ವಹಿಸಿದರು. ನಿಶ್ಚಿತಾ ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರು ಸೇರಿದಂತೆ ಎಮ್‌ಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ, ಇಲಾಖೆಯ ಸಿಬ್ಬಂದಿಗಳಾದ ಪ್ರಸನ್ನ ಕಪಟಕರ, ಸಾವಿತ್ರಿ ಹುರಕಡ್ಲೆ, ವೀರಣ್ಣ ಬೆಟಗೇರಿ, ಮಂಜುನಾಥ್ ಜಕ್ಕಮ್ಮನವರ, ಬಿಸ್ಮಿಲ್ಲಾಭಾನು, ರೇಣುಕಾ ಗೊಲ್ಲಪ್ಪನವರ ಇದ್ದರು.

## ಇಂದು 'ಶಿವಾನುಭವ'

■ ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ಸೋಮವಾರ ಎಡೆಯೂರು ಜಗದ್ಗುರು ತೋಂಟದಾರ್ಯ ಮಠದಲ್ಲಿ 2661ನೇ ಶಿವಾನುಭವ ಜರುಗಲಿದ್ದು, ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಲಿದ್ದಾರೆ.

'ಗಾಂಧೀಜಿ ಹಾಗೂ ಶಾಸ್ತ್ರೀಜಿ ಚಿಂತನೆಗಳು' ಕುರಿತು ಜೆ.ಕೆ ಜಮಾದಾರ ಉಪನ್ಯಾಸ ನೀಡಲಿದ್ದಾರೆ. ಶಿವಾನುಭವದಲ್ಲಿ ಮಹಾತ್ಮ ಗಾಂಧಿಜಿ ಹಾಗೂ ಲಾಲಬಹದ್ದೂರ ಶಾಸ್ತ್ರಿಗಳ ಜಯಂತ್ಯುತ್ಸವ ಆಚರಿಸಲಾಗುವುದು. ಗದಗ ಜಿಲ್ಲಾ ಸಹಕಾರಿ ಯೂನಿಯನ್‌ಗೆ ನಿರ್ದೇಶಕರಾಗಿ ಆಯ್ಕೆಯಾದ ನಿಮಿತ್ತ ಗದುಗಿನ ಜ.ತೋ. ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್ ಪಟ್ಟಣಶೆಟ್ಟಿ ಅವರಿಗೆ ಸಂಮಾನ ಜರುಗಲಿದೆ. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ತಂಡದವರು ವಚನ ಸಂಗೀತ ಹಾಡುವರು.



ಧರ್ಮಗ್ರಂಥ ಪಠಣವನ್ನು ವೀರೇಶ ಎಸ್.ಮಳಗಾವಿಮಠ, ವಚನ ಚಿಂತನೆಯನ್ನು ವಿಶ್ವಾಸ ಎಸ್. ಮಳಗಾವಿಮಠ ಇವರು ಮಾಡುವರು.

ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ದಾವಣಗೇರಿಯ ಮಾಗನೂರು ಪರಿವಾರದವರು ವಹಿಸಿಕೊಂಡಿದ್ದಾರೆಂದು ಸಂಘದ ಅಧ್ಯಕ್ಷರಾದ ಶೇಖಣ್ಣ ಕಳಸಾಪೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಹರಿಹಾಯ್ದ ಸಚಿವ ಎಚ್.ಕೆ ಪಾಟೀಲ

# ಜನರಿಗೆ ತಪ್ಪು ಸಂದೇಶ ಕೊಡುವುದು ಸರಿಯಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಶೋಭಾ ಕರಂದ್ಲಾಜೆ ಅವರು ರಾಜ್ಯದ ರಾಜಕೀಯದಲ್ಲಿ ಅನುಭವವಿರುವವರು, ಬಹಳ ಮಹತ್ವದ ಸ್ಥಾನದಲ್ಲಿದ್ದಾರೆ. ಕಾವೇರಿ ವಿಚಾರದಂತಹ ಇಕಟ್ಟಿನ ಸಂದರ್ಭದಲ್ಲಿ ರಾಜ್ಯಗಳನ್ನು ಸೇರಿಸಿ ಕೇಂದ್ರ ಸರ್ಕಾರ ಪರಿಹಾರ ಕಂಡುಹಿಡಿಯಲು ಮುಂದಾಗಬೇಕು. ಅದು ಕೇಂದ್ರ ಸರ್ಕಾರದ ಆದ್ಯ ಕರ್ತವ್ಯವೂ ಹೌದು. ನಮ್ಮ ಕಾವೇರಿ ನದಿಯ ಸ್ಥಿತಿಯ ಬಗ್ಗೆ ಚರ್ಚೆ ಮಾಡಬೇಕು, ಸಮಸ್ಯೆ ಬಗೆಹರಿಸುವ ಕೆಲಸ ಮಾಡಬೇಕು.

ಆದರೆ, ಕೇಂದ್ರದವರು ಈ ವಿಷಯದಲ್ಲಿಯೂ ರಾಜಕೀಯ ಮಾಡಲು ಹೊರಟ್ಟಿದ್ದಾರೆ ಎಂದು ಸಚಿವ ಎಚ್.ಕೆ ಪಾಟೀಲ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಹರಿಹಾಯ್ದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತ, ಕಾವೇರಿ ವಿಚಾರದಲ್ಲಿ ರಾಜ್ಯ ಸರ್ಕಾರ ಯಡವಟ್ಟು ಮಾಡಿದೆ ಎಂಬ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿಕೆಯ ವಿಚಾರವಾಗಿ ಪ್ರತಿಕ್ರಿಯಿಸಿ, ಕಾವೇರಿಯಲ್ಲಿ ನೀರು ಇದೇಯಾ? ಕಾವೇರಿ ನಿರ್ವಹಣಾ ಪ್ರಾಧಿಕಾರ, ಕೇಂದ್ರ ಸರ್ಕಾರದವರು ಏನು ಹೇಳುತ್ತಿದ್ದಾರೆ? ಯಾವ ಉದ್ದೇಶಕ್ಕೆ ತಮಿಳುನಾಡು–ಕರ್ನಾಟಕ ಪ್ರತಿನಿಧಿಗಳನ್ನು ಕರೆದು ಮಾತಾಡಲು ಮುಂದಾಗುತ್ತಿಲ್ಲ? ಇದು ನಿಮ್ಮ ಜವಾಬ್ದಾರಿ. ಜವಾಬ್ದಾರಿ ಮರೆತು ಜನರಿಗೆ ತಪ್ಪು ಸಂದೇಶ ಕೊಡುವುದು ಸರಿಯಲ್ಲ ಎಂದರು.



ಆಪರೇಷನ್ ಹಸ್ತ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿ ಕಾಂಗ್ರೆಸ್ ಪರ ಅಲೆಯಿದೆ. ಜನರು ಕಾಂಗ್ರೆಸ್ ಸರ್ಕಾರದ ಕಾರ್ಯಕ್ರಮಗಳನ್ನು ಬಹಳಷ್ಟು ಮೆಚ್ಚುತ್ತಿದ್ದಾರೆ. ನಮ್ಮ ಐದು ಗ್ಯಾರಂಟಿ ಯೋಜನೆಗಳನ್ನು ನೋಡಿ, ರಾಜಕಾರಣದಲ್ಲಿ ಇಲ್ಲದಿರುವವರು ಮನೆಗೆ ಹೋಗುತ್ತಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ರಾಜಕಾರಣವಿದೆ. ನಮಗೆ ಮತ ಹಾಕಲು ಯೋಚಿಸುತ್ತಿದ್ದವರು ಸಹ ಇಂದು ನಮ್ಮ ಮುಖಂಡರಿಗಿಂತ ಮುಂದೆ ನಿಲ್ಲುತ್ತಿದ್ದಾರೆ ಎಂದರು.

ಶೋಭಾ ಕರಂದ್ಲಾಜೆ ಮಹತ್ವದ ಸ್ಥಾನದಲ್ಲಿದ್ದಾರೆ.

ಇಂತಹ ಕಠಿಣ ಪರಿಸ್ಥಿತಿಯಲ್ಲಿ ಎರಡೂ ರಾಜ್ಯಗಳನ್ನ ಕೂಡಿಸಿ ಕೇಂದ್ರ ಸರ್ಕಾರ ಪರಿಹಾರ ಕಂಡುಹಿಡಿಯಬೇಕು. ಆದರೆ, ಇಂಥ ಸಂದರ್ಭದಲ್ಲಿಯೂ ರಾಜಕೀಯ ಮಾಡಲು ಹೊರಟ್ಟಿದ್ದಾರೆ ಎಂದು ಕೇಂದ್ರದ ವಿರುದ್ಧ ಕಿಡಿಕಾರಿದರು.

## ಬಿಜೆಪಿ ವತಿಯಿಂದ 'ಸ್ವಚ್ಛತಾ ಹಿ ಸೇವಾ'



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಧಾನಿ ಮೋದಿಯವರು ಗಾಂಧಿ ಜಯಂತಿ ಅಂಗವಾಗಿ 'ಸ್ವಚ್ಛತಾ ಹಿ ಸೇವಾ' ಅಭಿಯಾನಕ್ಕೆ ಕರೆ ನೀಡಿದ ಹಿನ್ನಲೆಯಲ್ಲಿ ಪಟ್ಟಣದ ಬಿಜೆಪಿ ಶಿರಹಟ್ಟಿ ಮಂಡಳ ಮತ್ತು ಲಕ್ಷ್ಮೇಶ್ವರ ನಗರ ಘಟಕದ ವತಿಯಿಂದ ರವಿವಾರ ಪಟ್ಟಣದ ಎಪಿಎಂಸಿ ಯಾರ್ಡ್‌ನಲ್ಲಿ ಸ್ವಚ್ಛತಾ ಕಾರ್ಯಕ್ರಮ ನೆರವೇರಿತು.

ಈ ಸಂದರ್ಭದಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ, ಎಪಿಎಂಸಿ ಮಾಜಿ ಅಧ್ಯಕ್ಷ ನೀಲಪ್ಪ ಹತ್ತಿ, ನಗರ ಘಟಕಾಧ್ಯಕ್ಷ ದುಂಡೇಶ ಕೊಟಗಿ, ಲೋಹಿತ್ ನೆಲವಗಿ, ಪುರಸಭೆ ಮಾಜಿ ಸದಸ್ಯ ವಿಜಯ ಕುಂಬಾರ, ಪ್ರವೀಣ ಬೊಮಲೆ, ರಮೇಶ ಹಾಳತೋಟದ, ಉಳುವೇಶ ಗೌಡ ಪಾಟೀಲ, ಅನಿಲ ಮುಳಗುಂದ, ಸೋಮಣ್ಣ ಉಪನಾಳ, ಬಸವರಾಜ ಕಲ್ಲೂರ, ರವಿ ಕೋರಿ, ರಾಮು ನಾಯಕ, ವೀರೇಶ ಸಾಸಲವಾಡ, ಮಂಜುನಾಥ ಬಸಾಪುರ, ಮಂಜುನಾಥ ಗಜಾಕೋಶ, ಮಲ್ಲಿಕಾರ್ಜುನ ನಿರಾಲೋಟಿ, ಮಂಜುನಾಥ ಗದಗ ಮುಂತಾದವರಿದ್ದರು.



ಮುಂಡರಗಿಯ ತಹಸೀಲ್ದಾರ ಕಾರ್ಯಾಲಯ ಹಾಗೂ ಪುರಸಭೆ ವತಿಯಿಂದ 'ಸ್ವಚ್ಛ ನಗರ ನಮ್ಮ ಅದ್ಯತೆ' ಅಭಿಯಾನದಲ್ಲಿ ಭಾನುವಾರ ವಿವಿಧ ಇಲಾಖೆಗಳ ವತಿಯಿಂದ ಜ.ಅ ಕಾಲೇಜಿನ ಎನ್‌ಸಿಸಿ ವಿದ್ಯಾರ್ಥಿಗಳು, ಪುರಸಭೆ ಪೌರಕಾರ್ಮಿಕರು ನಗರದ ಪ್ರಮುಖ ಬೀದಿಗಳಲ್ಲಿ, ಬಸ್ ನಿಲ್ದಾಣದಲ್ಲಿ, ಶ್ರಮದಾನ ಮಡಿದರು. ಪುರಸಭೆ ಮುಖ್ಯಧಿಕಾರಿ ಎಮ್.ಎ ನುರಾಹುಲ್ಲಖಾನ್, ರಮೇಶ್ ಹೊಸಮನಿ, ಪುರಸಭೆ ಸದಸ್ಯ ರಾಜಭಕ್ಷಿ ಬೆಟಗೇರಿ ಮುಂತಾದವರಿದ್ದರು.



ಗದಗ ನಗರದ ವಿದ್ಯಾದಾನ ಸಮಿತಿ ಕನ್ನಡ ಪ್ರಾಥಮಿಕ ಶಾಲಾ ವತಿಯಿಂದ ಗಾಂಧಿ ಜಯಂತಿ ಅಂಗವಾಗಿ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಧೀರೇಂದ್ರ ಹುಯಿಲಗೋಳ, ಮುಖ್ಯೋಪಾಧ್ಯಾಯ ಎಂ.ವಿ ಹವಾಲ್ದಾರ, ಎಂ.ಆರ್. ಡೊಳ್ಳಿನ ಹಾಗೂ ಶಾಲೆಯ ಸಮಸ್ತ ಶಿಕ್ಷಕ–ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ.ಪಾಟೀಲ

# ಸ್ವಚ್ಛ ನಗರವನ್ನಾಗಿ ಮಾಡಲು ಪಣ ತೊಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಚ್ಛತೆ ಮಾಡುವದರಿಂದ ಸ್ವಚ್ಛತೆ ಬಗ್ಗೆ ಗಂಭೀರತೆ ಹಾಗೂ ತಿಳುವಳಿಕೆಯನ್ನು ನೀಡುತ್ತದೆ. ಸ್ವಚ್ಛತೆ ಕುರಿತು ನಮ್ಮನ್ನು ಜಾಗೃತಗೊಳಿಸಲು ಈ ಕಾರ್ಯಕ್ರಮವು ಅತ್ಯಪಯುಕ್ತವಾಗಿದೆ. ಜಿಲ್ಲೆಯಲ್ಲಿ ಒಟ್ಟು 62 ಕಡೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸ್ವಚ್ಛತೆ ಬಗ್ಗೆ ಈ ಒಂದು ದಿನ ಮಾತ್ರ ತೊಡಗಿಸಿಕೊಳ್ಳದೆ ಇದನ್ನು ನಮ್ಮ ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಗದಗ ನಗರವನ್ನು ಸ್ವಚ್ಛ ನಗರವನ್ನಾಗಿಸಲು ಪಣತೊಡುವಂತೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕರೆ ನೀಡಿದರು.

ಅವರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಗೂ ಗದಗ–ಬೆಟಗೇರಿ ನಗರಸಭೆ ಸೇರಿದಂತೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ ನಗರದ ಭೀಷ್ಮಕೆರೆ ಆವರಣದಲ್ಲಿ ರವಿವಾರ ಬೆಳಗ್ಗೆ ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿ ಕಸದಿಂದ ಇಂಧನವನ್ನು ಉತ್ಪಾದನೆಯನ್ನು ಮಾಡುವ ತಂತ್ರಜ್ಞಾನವನ್ನು ಮುಂಬರುವ ದಿನಮಾನಗಳಲ್ಲಿ ಸ್ಥಾಪಿಸಲಾಗುವದು ಈ ಕುರಿತು ಪ್ರಕ್ರಿಯೆಗಳು ಪ್ರಾರಂಭವಾಗಿವೆ. ಗದಗ ನಗರವು ದೇಶದ ಅತ್ಯುತ್ತಮ ಗಾಳಿಯನ್ನು ಹೊಂದಿರುವಂತಹ ಜಿಲ್ಲೆಯಾಗಿರುವುದು ಹೆಮ್ಮೆಯ ವಿಷಯವಾಗಿದ್ದು, ಇದೊಂದು ನಮಗೆ ನೈಸರ್ಗಿಕ ಕೊಡುಗೆಯಾಗಿದ್ದು ಇದನ್ನು ಸ್ವಚ್ಛವಾಗಿಟ್ಟುಕೊಳ್ಳುವದು ನಮ್ಮೆಲ್ಲರ ಹೊಣೆಯಾಗಿದ್ದು ನಗರದ ಸ್ವಚ್ಛತೆಗೆ ನಾವು– ನೀವೆಲ್ಲರೂ ಕೈಜೋಡಿಸುವಂತೆ ತಿಳಿಸಿದರು.



ಈ ಸಂದರ್ಭದಲ್ಲಿ ವಿಧಾನ ಪರಿಷತ ಸದಸ್ಯ ಎಸ್.ವಿ.ಸಂಕನೂರ, ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ, ನಗರಸಭೆ ಪೌರಾಯುಕ್ತ ಗಂಗಪ್ಪ ಎಂ,. ವಾರ್ತಾಧಿಕಾರಿ ವಸಂತ ಮಡ್ಲೂರ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಸೇರಿದಂತೆ ನಗರಸಭೆಯ ಸದಸ್ಯರು, ಚುನಾಯಿತ ಪ್ರತಿನಿಧಿಗಳು, ಶಾಲಾ–ಕಾಲೇಜಿನ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಜರಿದ್ದರು.

ಇಂದು ದೇಶ ಕಂಡ ಶ್ರೇಷ್ಠ ನಾಯಕ ಮಹಾತ್ಮ ಗಾಂಧೀ, ಲಾಲ್ ಬಹದ್ದೂರ್ ಶಾಸ್ತ್ರೀ ಜನ್ಮದಿನ

# ಮಹನೀಯರ ತತ್ವಾದರ್ಶಗಳು ಯಶಸ್ಸಿನ ಮಾರ್ಗದರ್ಶಿ



ಆಧುನಿಕ ಜಗತ್ತು ಕಂಡ ಮಹನೀಯರಲ್ಲಿ ಮಹಾತ್ಮ ಗಾಂಧೀಜಿ ಶ್ರೇಷ್ಠರು. ಅವರು ಸ್ವಾತಂತ್ರ್ಯ, ಸಮಾನತೆ, ಅಹಿಂಸೆ, ತ್ಯಾಗ, ಸರ್ವೋದಯ ಈ ಎಲ್ಲಾ ಮೌಲ್ಯಗಳ ಜೀವಂತ ಸಾಕ್ಷಿಯಾಗಿದ್ದವರು. ಇತರರಿಗೆ ನೋವಾಗದಂತೆ ನಡೆದುಕೊಳ್ಳುವುದು, ಉಪವಾಸದ ಆಚರಣೆ, ಸಮಯಪಾಲನೆ, ಶಿಸ್ತು ಇವು ನಮ್ಮ ಜೀವನವನ್ನು ಯಶಸ್ಸಿನ ಉತ್ತುಂಗಕ್ಕೆ ಕೊಂಡೊಯ್ಯುತ್ತವೆ.

ಮಕ್ಕಳಿಗೆ ಶಿಕ್ಷಣದ ಮೂಲಕ ಶ್ರಮದ ಬೆಲೆ ತಿಳಿಯಬೇಕು, ಕಲಿಕೆ ಮತ್ತು ಗಳಿಕೆ ಜೊತೆಯಲ್ಲಿ ಸಾಗಬೇಕು. ಈ ದಿಸೆಯಲ್ಲಿ ಮೂಲ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದ್ದರು. ಗೃಹಕೈಗಾರಿಕೆಗಳು ಬೆಳೆಯಬೇಕು, ತನ್ಮೂಲಕ ದೇಶದ ಅಭಿವೃದ್ಧಿ ಸಾಧ್ಯ ಎಂದು ಗಾಂಧೀಜಿ ನಂಬಿದ್ದರು. ಗಾಂಧೀಜಿ ಅವರ ತತ್ವಗಳನ್ನು ಜೀವಂತವಾಗಿ ಕಾಪಾಡಿಕೊಂಡು ಅವರಂತೆ ನಡೆದು ತೋರಿದವರು ಲಾಲ್ ಬಹದ್ದೂರ್ ಶಾಸ್ತ್ರೀಯವರು. ಸಾರಿಗೆ ಮಂತ್ರಿಯಾಗಿ, ರೈಲ್ವೆ ಮಂತ್ರಿಯಾಗಿ, ಗೃಹಮಂತ್ರಿಯಾಗಿ ದೇಶದ ಪ್ರಧಾನ ಮಂತ್ರಿಯಾಗಿ ಉನ್ನತ ಸ್ಥಾನವನ್ನು ಅಲಂಕರಿಸಿದ ಶಾಸ್ತ್ರೀ ಅವರು ತಮ್ಮ ಅಧಿಕಾರವನ್ನು ಎಂದಿಗೂ ತಮ್ಮ ಸ್ವಾರ್ಥಕ್ಕೆ ಬಳಸಿಕೊಳ್ಳಲಿಲ್ಲ. 'ಮಹಾತ್ಮ ಗಾಂಧಿಯವರ ತ್ಯಾಗ, ಲಾಲ್ ಬಹದ್ದೂರ್ ಶಾಸ್ತ್ರೀಯವರ ದೃಢ ನಿರ್ಧಾರ ನಮಗೆಲ್ಲ ಸ್ಫೂರ್ತಿ'ಯಾಗಿದೆ.

ಭಾರತ ಒಂದು ಸ್ವಚ್ಛ ರಾಷ್ಟ್ರವಾಗಬೇಕು, ವಿಶ್ವಕ್ಕೆ ಮಾದರಿಯಾಗಬೇಕು... ಹೀಗೆ ಗಾಂಧೀಜಿಯವರು ಕಂಡಿದ್ದ ಹಲವು ಕನಸುಗಳು ಸ್ವಾತಂತ್ರ್ಯಾನಂತರ ಹಲವಾರು ವರ್ಷಗಳವರೆಗೂ ನನಸಾಗಿರಲಿಲ್ಲ. ಅವರ ಮಹದಾಸೆಯಾಗಿದ್ದ ಖಾದಿ ಬಳಕೆಯ ಪ್ರಮಾಣ ಕುಂಟುತ್ತಾ ಸಾಗಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿಯವರ ನಿರಂತರ ಪ್ರೋತ್ಸಾಹ ಹಾಗೂ ಖಾದಿಯ ಬಳಕೆಯನ್ನು ಉತ್ತೇಜಿಸಬೇಕೆನ್ನುವ ಅವರ ಬದ್ಧತೆಯಿಂದಾಗಿ ಇದೀಗ ಖಾದಿ ಎನ್ನುವುದು ದೇಶದ ಯುವ ಜನತೆಯ ಹೆಗ್ಗುರುತಿನಂತಾಗಿದೆ. ನೇರ ಹಾಗೂ ಪರೋಕ್ಷವಾಗಿ ಖಾದಿ ಉದ್ಯಮ ಲಕ್ಷಾಂತರ ಹೊಸ ಉದ್ಯೋಗಗಳನ್ನು ಸೃಷ್ಟಿಸಿದೆ.

ಮೋದಿ ನೇತೃತ್ವದ ಕೇಂದ್ರ ಸರ್ಕಾರ 4 ವರ್ಷಗಳ ಹಿಂದೆ ಗಾಂಧಿ ಜಯಂತಿಯಂದು ಪ್ರಾರಂಭಿಸಿದ ಸ್ವಚ್ಛ ಭಾರತ್ ಅಭಿಯಾನ ಇದುವರೆಗಿನ ಎಲ್ಲಾ ಅಭಿಯಾನಗಳಿಗಿಂತಲೂ ಹೆಚ್ಚು ಜನಪ್ರಿಯವಾಗಿದೆ. ಇದೀಗ ದೇಶದ ಯಾವುದೇ ಮೂಲೆಯಲ್ಲಿ ನಾವು ಒಂದು ಸಣ್ಣ ಚಾಕಲೇಟ್ ಕವರ್ ಎಸೆಯಬೇಕೆಂದರೂ ಆಚೀಚೆ ನೋಡಬೇಕಾಗಿದೆ. ಇದೀಗ ಗಾಂಧಿ ಜಯಂತಿಯೆಂದರೆ ಕೇವಲ ಅವರ ಫೋಟೋಗಳನ್ನು ಪೂಜೆ ಮಾಡುವುದಾಗಲೀ, ಅವರ ಪುತ್ಥಳಿಗಳಿಗೆ ಹಾರ ಹಾಕುವುದಷ್ಟಕ್ಕೇ ಉಳಿದಿಲ್ಲ. ಅಂದು ಅವರು ಕಂಡ ಕನಸನ್ನು ನನಸಾಗಿಸುವ ಕಾರ್ಯವನ್ನೂ ಕೂಡಾ ಸಾಗರೋಪಾದಿಯಲ್ಲಿ ಸ್ವಯಂ ಪ್ರೇರಿತರಾಗಿ ಮಾಡಲಾಗುತ್ತಿದೆ.

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ 9 ವರ್ಷಗಳ ಕಾಲ ಸೆರೆ ಮನೆ ವಾಸ ಅನುಭವಿಸಿದ ಲಾಲ್ ಬಹಾಹದ್ದೂರ್ ಶಾಸ್ತ್ರೀ ಅವರು ಜನಿಸಿದ್ದು ಕೂಡಾ ಅಕ್ಟೋಬರ್ 2ರಂದೇ. ಪ್ರಾಮಾಣಿಕತೆಯೇ ಮೈವೆತ್ತಂತಿದ್ದ ಅವರು ಭಾರತದ ಪ್ರಧಾನಿಯಾಗಿ ಸಾಧಿಸಿದ ವಿಕ್ರಮಗಳು ಎಂದೆಂದಿಗೂ ನಮಗೆ ಆದರ್ಶವಾಗಬೇಕು. ಅವರ 'ಜೈ ಜವಾನ್-ಜೈ ಕಿಸಾನ್' ಘೋಷಣೆಯು ಈ ದೇಶದ ಸೇನೆ ಹಾಗೂ ಈ ದೇಶದ ರೈತರಿಗೆ ಅಪಾರ ನೈತಿಕ ಬೆಂಬಲವನ್ನು ಒದಗಿಸಿತು.

ಶಾಸ್ತ್ರೀಜಿಯವರ ಇನ್ನೊಂದು ಅತ್ಯಂತ ಮಹತ್ವದ ಕರೆಯೆಂದರೆ, ದೇಶದ ಸಂಕಷ್ಟ ನಿವಾರಣೆಗಾಗಿ ವಾರದಲ್ಲಿ ಒಂದು ದಿನ ಊಟವನ್ನು ಬಿಡಲು ದೇಶದ ಜನತೆಗೆ ಮನವಿ ಮಾಡಿದ್ದು. ಕೇವಲ ಅಷ್ಟೇ ಅಲ್ಲ, ತಾವೂ ಸಹ ಸೋಮವಾರದ ಊಟವನ್ನು ತ್ಯಜಿಸಿ ಆದರ್ಶ ಮೆರೆದವರು ಶಾಸ್ತ್ರೀಜಿ. ಇದೆಲ್ಲವನ್ನೂ ಯಾರನ್ನೋ ಮೆಚ್ಚಿಸಲೋ ಅಥವಾ ಇನ್ಯಾರನ್ನೋ ಟೀಕಿಸಲೋ ನಾನಿಲ್ಲಿ ಹೇಳುತ್ತಿಲ್ಲ. ಬದಲಿಗೆ ಆ ಮಹನೀಯರ ತತ್ವ-ಆದರ್ಶಗಳನ್ನು ಮುಂದಿನ ಪೀಳಿಗೆಯವರೆಗೆ ತಲುಪಿಸಲು ಏನು ಮಾಡಬೇಕು ಮತ್ತು ನಾವು ಯಾರನ್ನು ಅನುಸರಿಸಬೇಕು ಎನ್ನುವ ಚರ್ಚೆಯೊಂದನ್ನು ಹುಟ್ಟು ಹಾಕುವ ದೃಷ್ಟಿಯಿಂದಷ್ಟೇ ಹೇಳುತ್ತಿದ್ದೇನೆ.

ಅಂತಿಮವಾಗಿ, ಎಲ್ಲವನ್ನೂ ಪರಾಮರ್ಶಿಸಿ ಯಾವುದು ನಿಜವಾದ ಗಾಂಧಿ ಮಾರ್ಗ, ಶಾಸ್ತ್ರೀಜಿಯವರು ಹಾಕಿಕೊಟ್ಟ ನಿಜವಾದ ಆದರ್ಶಗಳನ್ನು ಅನುಸರಿಸುತ್ತಿರುವವರು ಯಾರು, ನಾವು ಯಾರನ್ನು ಅನುಸರಿಸಬೇಕು, ಯಾರನ್ನು ತಿರಸ್ಕರಿಸಬೇಕು ಎನ್ನುವ ನಿರ್ಧಾರಗಳನ್ನು ತೆಗೆದುಕೊಳ್ಳುವ ಅಧಿಕಾರ ನಮ್ಮ ಮತ್ತು ನಿಮ್ಮ ಕೈಯಲ್ಲೇ ಇದೆ. ಅವರ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ.



– ಎಂ.ಎಚ್ ಸವದತ್ತಿ.
ಸಹ-ಶಿಕ್ಷಕರು,
ಏಕಲಾಸಪುರ.

## ತಾಲೂಕಿನ ಕೀರ್ತಿ ಹೆಚ್ಚಿಸಿದ ಬೀಡನಾಳ ಗ್ರಾಮ ಪಂಚಾಯಿತಿ





■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಬೀಡನಾಳ ಗ್ರಾಮ ಪಂಚಾಯಿತಿಯು 'ಗಾಂಧಿ ಗ್ರಾಮ ಪುರಸ್ಕಾರ'ಕ್ಕೆ ಆಯ್ಕೆಯಾಗಿದ್ದು, ಗ್ರಾ.ಪಂ ಅಧ್ಯಕ್ಷ ಕೊಪ್ಪಣ್ಣ ಕೊಪ್ಪಣವರ, ಸರ್ವ ಸದ್ಯಸರು ಹಾಗೂ ಅಧಿಕಾರಿ, ಸಿಬ್ಬಂದಿ ವರ್ಗದವರಲ್ಲಿ ಹೊಸ ಹುಮ್ಮಸ್ಸು ಮೂಡಿಸಿದೆ.

ನರೇಗಾ ಯೋಜನೆಯ ಅನುಷ್ಠಾನ, ಗ್ರಾಮೀಣ ಜನತೆಗೆ ಅಗತ್ಯ ಮೂಲಭೂತ ಸೌಕರ್ಯ, ವಸತಿ ಯೋಜನೆಯ ಅನುಷ್ಠಾನ, ಕುಡಿಯವ ನೀರಿನ ನಿರ್ವಹಣೆ, 14ನೇ ಹಣಕಾಸು ಅನುದಾನದ ಬಳಕೆ, ಗ್ರಾ.ಪಂ ಮಾಸಿಕ ಸಭೆಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಅಳವಡಿಸುವುದು, ತೆರಿಗೆ ಸಂಗ್ರಹ, ಸ್ವಚ್ಛತೆ ಶೌಚಾಲಯ, ತ್ಯಾಜ್ಯ ನಿರ್ವಹಣೆ, ಪಂಚಾಯಿತಿ ಆಡಳಿತ ವ್ಯವಸ್ಥೆ, ಸಕಾಲ ಸೇವೆ ಅನುಷ್ಠಾನ ಸೇರಿ ಒಟ್ಟು 34ಕ್ಕೂ ಹೆಚ್ಚು ಅಂಶಗಳ ಸಾಧನೆಗಳನ್ನು ಪರಿಗಣಿಸಿ ಈ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿದೆ.

ಗ್ರಾ.ಪಂ ಅಧ್ಯಕ್ಷ ಕೊಪ್ಪಣ ಕೊಪ್ಪಣ್ಣವರ, ಬೀಡನಾಳ ಗ್ರಾ.ಪಂ ಈ ಬಾರಿ ಸರಕಾರ ನೀಡುವ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅಯ್ಕೆಯಾಗಿರುವುದು ತಾಲೂಕಿನ ಕೀರ್ತಿ ಹೆಚ್ಚಿಸಿದೆ. ಕುಡಿಯುವ ನೀರು, ಸ್ವಚ್ಛತೆ, ಬೀದಿ ದೀಪಗಳ ನಿರ್ವಹಣೆ, ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿ ಕಾರ್ಯಗಳಿಗೆ ಪೂರಕವಾಗಿದ್ದು, ನಾಲ್ಕು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಲಾಗಿದೆ.

ಗ್ರಾಮದ ಜನತೆಯ ಸಹಕಾರದಿಂದ ಈ ಸಾಧನೆ ಸಾಧ್ಯವಾಗಿದ್ದು, ಸರ್ವರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಈ ಅವಧಿಯಲ್ಲಿ ನಮ್ಮ ಗ್ರಾ.ಪಂಗೆ ಗಾಂಧಿ ಪುರಸ್ಕಾರ ಬಂದಿರುವುದು ಸಂತಸ ತಂದಿದೆ. ನಿಯಮಾನುಸಾರ ಸರಕಾರದ ಸವಲತ್ತುಗಳನ್ನು ನಾಗರಿಕರಿಗೆ ತಲುಪಿಸುವಲ್ಲಿ ಗರಿಷ್ಠ ಪ್ರಯತ್ನ ಮಾಡಿದ್ದು, ಹೆಚ್ಚಿನ ಅಂಶಗಳ ಸಾಧನೆಯ ಆಧಾರದಲ್ಲಿ ಪುರಸ್ಕಾರ ಲಭಿಸಿದೆ ಎಂದು ಪಿಡಿಒ ಮಂಜುಳಾ ಪಾಟೀಲ ಹರ್ಷ ವ್ಯಕ್ತಪಡಿಸಿದರು.

## 350 ವರ್ಷಗಳ ನಂತರ, ಛತ್ರಪತಿ ಶಿವಾಜಿಯ 'ಹುಲಿ ಉಗುರು' ಶಸ್ತ್ರ ಮರಳಿ ಭಾರತಕ್ಕೆ!

■ವಿಜಯಸಾಕ್ಷಿ ಸುದ್ದಿ, ಮುಂಬೈ

ಛತ್ರಪತಿ ಶಿವಾಜಿ ಮಹಾರಾಜರ ಪೌರಾಣಿಕ ವಾಘ್ ನಖ್ ಅಥವಾ ಹುಲಿ ಉಗುರು(ವ್ಯಾಘ್ರನಖ) ಮಾದರಿ ಅಸ್ತ್ರ ಬರೊಬ್ಬರಿ 350 ವರ್ಷಗಳ ಬಳಿಕ ಭಾರತಕ್ಕೆ ಮರಳುತ್ತಿದೆ.

1659 ರಲ್ಲಿ ಬಿಜಾಪುರ ಸುಲ್ತಾನರ ಸೇನಾಪತಿ ಅಫ್ಜಲ್ ಖಾನ್ ನನ್ನು ಸೋಲಿಸಲು ಶಿವಾಜಿ ಮಹಾರಾಜರು ಬಳಸಿದ್ದ 'ಹುಲಿ ಉಗುರು' ಆಯುಧವು ನವೆಂಬರ್‌ನಲ್ಲಿ ಲಂಡನ್‌ನಿಂದ ಮಹಾರಾಷ್ಟ್ರಕ್ಕೆ ಮರಳಲಿದೆ ಎಂದು ಹೇಳಲಾಗಿದೆ. ಈ ವರ್ಷ ಛತ್ರಪತಿ ಶಿವಾಜಿಯ ಪಟ್ಟಾಭಿಷೇಕದ 350 ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದ್ದು, ಈ ಸಂದರ್ಭದ ಸ್ಮರಣಾರ್ಥ ಮೂರು ವರ್ಷಗಳ ಪ್ರದರ್ಶನಕ್ಕಾಗಿ ಲಂಡನ್‌ನ ವಿಕ್ಟೋರಿಯಾ ಮತ್ತು ಆಲ್ಬರ್ಟ್ ಮ್ಯೂಸಿಯಂನಿಂದ ಹುಲಿ ಪಂಜದ ಆಯುಧ ವ್ಯಾಘ್ರನಖವನ್ನು ಮರಳಿ ತರಲಾಗುತ್ತಿದೆ.

ಮಹಾರಾಷ್ಟ್ರದ ಸಂಸ್ಕೃತಿ ಸಚಿವ ಸುಧೀರ್ ಮುಂಗಂತಿವಾರ್ ಅವರು ಮಂಗಳವಾರ ಲಂಡನ್‌ಗೆ ಆಗಮಿಸಲಿದ್ದು, ಆಯುಧವನ್ನು ಹಿಂದಿರುಗಿಸುವ ಕುರಿತು ಮ್ಯೂಸಿಯಂನೊಂದಿಗೆ ಒಪ್ಪಂದಕ್ಕೆ ಸಹಿ ಹಾಕಲಿದ್ದಾರೆ. ಈ ಬಗ್ಗೆ ಮಾತನಾಡಿರುವ ಅವರು "ಮೊದಲ ಹಂತದಲ್ಲಿ, ನಾವು ಶಿವಾಜಿ ಮಹಾರಾಜರ ವಾಘ್ ನಖ್ (ವ್ಯಾಘ್ರನಖ) ಅನ್ನು ಮರಳಿ ತರುತ್ತಿದ್ದೇವೆ. ಅದನ್ನು ನವೆಂಬರ್‌ನಲ್ಲಿ ಇಲ್ಲಿಗೆ ತರಬೇಕು ಮತ್ತು ಅದಕ್ಕಾಗಿ ನಾವು ಎಂಒಯು (ಒಪ್ಪಂದ)ಗೆ ಸಹಿ ಹಾಕುತ್ತಿದ್ದೇವೆ. ಛತ್ರಪತಿ ಶಿವಾಜಿ ಮಹಾರಾಜರು ಅಫ್ಜಲ್ ಖಾನ್ ಕರುಳನ್ನು ಕಿತ್ತೊಗೆದ ದಿನದಂದು ಅದನ್ನು ತರುವುದು ನಮ್ಮ ಪ್ರಯತ್ನ" ಎಂದು ಸಚಿವ ಮುಂಗಂತಿವಾರ್ ಹೇಳಿದರು.

## ರಾಷ್ಟ್ರೀಯ ಪ್ರತಿನಿಧಿಗಳ ಮಹಾ ಸಮಾವೇಶ ಅ.3ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಶೆಫರ್ಡ್ಸ್ ಇಂಡಿಯಾ ಇಂಟರ್‌ನ್ಯಾಷನಲ್‌ನ 9ನೇ ವಾರ್ಷಿಕ ರಾಷ್ಟ್ರೀಯ ಪ್ರತಿನಿಧಿಗಳ ಮಹಾ ಸಮಾವೇಶ ಹಾಗೂ ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ರಾಷ್ಟ್ರೀಯ ಸನ್ಮಾನ ಕಾರ್ಯಕ್ರಮವು ಅ.3ರಂದು ಬೆಳಿಗ್ಗೆ 11 ಗಂಟೆಗೆ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ನೆರವೇರಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಕಾಗಿನೆಲೆ ಮಹಾ ಸಂಸ್ಥಾನ ಮಠ ಕನಕಗುರು ಪೀಠದ ಹಿರಿಯ ಹಾಗೂ ಕಿರಿಯ ಶ್ರೀಗಳು ವಹಿಸುವರು. ಹರಿಯಾಣ ರಾಜ್ಯದ ಘನತೆವೆತ್ತ ರಾಜ್ಯಪಾಲರು ಹಾಗೂ ಕುರುಬ ಸಮಾಜದ ಹಿರಿಯರಾದ ಬಂಡಾರು ದತ್ತಾತ್ರೇಯ, ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಎಸ್.ಪಿ ಸಿಂಗ್ ಭಘೇಲ್, ಸಚಿವ ಭೈರತಿ ಸುರೇಶ, ಸಮಾಜದ ಹಾಲಿ ಹಾಗೂ ಮಾಜಿ ಶಾಸಕರು, ಚುನಾಯಿತ ಪ್ರತಿನಿಧಿಗಳು ಭಾಗವಹಿಸುವರು.

ಜಿಲ್ಲೆಯ ವಿವಿಧ ತಾಲೂಕುಗಳ ಸಮಾಜದ ಬಾಂಧವರು, ಹಿತೈಷಿಗಳು, ಅಭಿಮಾನಿಗಳು, ನೌಕರ ಮಿತ್ರರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಈ.ಹೆಬಸೂರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಬೈಯಪ್ಪನಹಳ್ಳಿ- ಕೆಆರ್ ಪುರ ಮೆಟ್ರೋ ಮಾರ್ಗವನ್ನು ಕೂಡಲೇ ಉದ್ಘಾಟಿಸಬೇಕು: ಸಂಸದ ತೇಜಸ್ವಿ ಸೂರ್ಯ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಹುನಿರೀಕ್ಷಿತ ಬೈಯಪ್ಪನಹಳ್ಳಿ-ಕೆಆರ್ ಪುರ ಮೆಟ್ರೋ ಮಾರ್ಗವನ್ನು ಕೂಡಲೇ ಉದ್ಘಾಟಿಸುವ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸಂಸದ ತೇಜಸ್ವಿ ಸೂರ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

ಬಿಜೆಪಿ ಯುವ ಮೋರ್ಚಾ ಆಯೋಜಿಸಿದ 'ಸ್ವಚ್ಛತಾ ಹೀ ಸೇವಾ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, "ಪ್ರತಿದಿನ ಸುಮಾರು 5 ರಿಂದ 6 ಲಕ್ಷ ಜನರು ಬೆಂಗಳೂರು ಮೆಟ್ರೋವನ್ನು ಬಳಸುತ್ತಾರೆ, ಬೈಯಪ್ಪನಹಳ್ಳಿ-ಕೆಆರ್ ಪುರ ಮಾರ್ಗ ಉದ್ಘಾಟನೆಯಾದರೆ ಈ ಸಂಖ್ಯೆಯಲ್ಲಿ ಸುಮಾರು ಶೇ. 50-60 ರಷ್ಟು ಪ್ರಯಾಣಿಕರಿಗೆ ಪ್ರಯೋಜನವಾಗಲಿದೆ ಎಂದರು. ಪ್ರಾಯೋಗಿಕ ಪರೀಕ್ಷೆ ಸೇರಿದಂತೆ ಸಿಎಂಆರ್ ಎಸ್ ನಿಂದ ಎಲ್ಲಾ ಒಪ್ಪಿಗೆ ದೊರೆತಿದ್ದರೂ ರಾಜ್ಯ ಸರ್ಕಾರ ಉದ್ಘಾಟನೆಗೆ ಇನ್ನೂ ವಿಳಂಬ ಮಾಡುತ್ತಿದೆ. ರಾಹುಲ್ ಗಾಂಧಿ ಅಥವಾ ಇತರ ಕಾಂಗ್ರೆಸ್ ನಾಯಕರು ಬಂದು ಉದ್ಘಾಟನೆ ಮಾಡಲಿ ಎಂಬ ಕಾರಣದಿಂದ ಮಾರ್ಗವನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ಸರ್ಕಾರ ಮೀನಾ ಮೇಷ ಎಣಿಸುತ್ತಿದೆ ಎಂದು ಅವರು ಆರೋಪಿಸಿದರು.



ಎಲ್ಲಾ ಸಿದ್ದಗೊಂಡಿದ್ದರೂ ಮೆಟ್ರೋ ರೈಲು ಸಂಚಾರ ಆರಂಭವಾಗದಿರುವುದರಿಂದ ಜನರು ನಿರಾಸೆಗೊಂಡಿದ್ದಾರೆ. ಆದರೆ ರಾಜ್ಯ ಸರ್ಕಾರವು ರಾಜಕೀಯ ಕಾರಣಕ್ಕಾಗಿ ಅದನ್ನು ಮುಕ್ತಗೊಳಿಸುತ್ತಿಲ್ಲ. ಕೂಡಲೇ ಈ ಮಾರ್ಗವನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಬೇಕು, ಬೆಂಗಳೂರು ಜನರು ತೊಂದರೆ ಅನುಭವಿಸಲು ಬಿಡಬಾರದು ಎಂದು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಒತ್ತಾಯಿಸುವುದಾಗಿ ತಿಳಿಸಿದರು.

ಪಾರ್ಶ್ವವಾಯು ಪೀಡಿತ ದೂರುದಾರರಿಗೆ ನ್ಯಾಯ ಒದಗಿಸಿದ ಜಿಲ್ಲಾ ಗ್ರಾಹಕರ ಆಯೋಗ

## ಪಿಂಚಣಿ ನಿಗದಿ ಮಾಡದ ಪಿಎಫ್ ಇಲಾಖೆಗೆ 1 ಲಕ್ಷ ರೂ. ದಂಡ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೆಳಗಾವಿ ಜಿಲ್ಲೆಯ ನಿಪ್ಪಾಣಿಯ ಕುಂಬಾರಗಲ್ಲಿ ನಿವಾಸಿ ಸುಶೀಲಾ ಕುಂಬಾರ ಎಂಬುವವರು ನಿಪ್ಪಾಣಿಯ ರಶಿಕಭಾಯಿ ಪಟೇಲ ತಂಬಾಕು ಫ್ಯಾಕ್ಟರಿಯಲ್ಲಿ 1990ರಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದರು. ಆಗ ಅವರು ಇಪಿಎಫ್ ಯೋಜನೆಯಡಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದರು. ತದನಂತರ ಅವರು ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆಯಲ್ಲಿ 30.04.2000ರಂದು ಪಾರ್ಶ್ವವಾಯು ರೋಗಕ್ಕೆ ತುತ್ತಾಗಿದ್ದರು.

ಸದರಿ ದೈಹಿಕ ನ್ಯೂನತೆಯಿಂದ ಬಳಲುತ್ತಿದ್ದ ಕಾರಣ, ಅನಿವಾರ್ಯವಾಗಿ ಕೆಲಸದಿಂದ ದೂರ ಉಳಿದಿದ್ದರು. ಸರ್ಕಾರಿ ಆಸ್ಪತ್ರೆಯ ವೈದ್ಯರು ಅವರಿಗೆ ಶೇ.80 ದೈಹಿಕ ನ್ಯೂನ್ಯತೆ ಉಂಟಾಗಿದೆ ಅಂತಾ ವೈದ್ಯಕೀಯ ಪ್ರಮಾಣಪತ್ರ ನೀಡಿದ್ದರು. ದೂರುದಾರರು ಫಾರ್ಮ 10-ಡಿ, ಸ್ಕೀಮ್ ಸರ್ಟಿಫಿಕೇಟ್, ವೈದ್ಯಕೀಯ ಪ್ರಮಾಣಪತ್ರ ಸಹಿತ ಪಿಎಫ್ ಇಲಾಖೆಗೆ ಪಿಂಚಣಿ ನಿಗದಿ ಮಾಡಲು ಅರ್ಜಿ ಸಲ್ಲಿಸಿದ್ದರು. ಸದರಿ ಅರ್ಜಿಯಂತೆ ದೂರುದಾರಳಿಗೆ ಪ್ರತಿ ತಿಂಗಳು ರೂ.250 ರಂತೆ 30.04.2000ನಿಂದ ಅಂಗವಿಕಲತೆಯ ಪಿಂಚಣಿ ಮಂಜೂರು ಮಾಡಬೇಕಾಗಿತ್ತು. ಹತ್ತಾರು ವರ್ಷ ಕಳೆದರೂ ಪಿಎಫ್ ಇಲಾಖೆಯವರು ಪಿಂಚಣಿ ನಿಗದಿ ಮಾಡಿರಲಿಲ್ಲ. ಅಂತಹ ಅವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಸೇವಾ ನ್ಯೂನತೆ ಆಗುತ್ತದೆ ಎಂದು ಹೇಳಿ ಪಿಎಫ್ ಇಲಾಖೆಯವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ದೂರುದಾರಳು ಜಿಲ್ಲಾ ಗ್ರಾಹಕರ ಆಯೋಗಕ್ಕೆ 16.12.2019ರಂದು ದೂರನ್ನು ಸಲ್ಲಿಸಿದ್ದರು. ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ, ವಿಶಾಲಾಕ್ಷಿ ಬೋಳಶೆಟ್ಟಿ ಮತ್ತು ಸದಸ್ಯ ಪಿ.ಸಿ ಹಿರೇಮಠ ದೂರುದಾರಳು ಒದಗಿಸಿದ ದಾಖಲೆಗಳನ್ನು ಪರಿಶೀಲಿಸಿ, ಅವಳಿಗೆ ಪ್ರತಿ ತಿಂಗಳು ಅಂಗವಿಕಲತೆಯ ಪಿಂಚಣಿ ರೂ.250 ಮಂಜೂರು ಮಾಡುವಲ್ಲಿ ಪಿಎಫ್ ಇಲಾಖೆ ವಿಫಲವಾಗಿದೆ. ಅವರ ಈ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಆಗುತ್ತದೆ ಎಂದು ಅಭಿಪ್ರಾಯಪಟ್ಟು, ದೂರುದಾರಳಿಗೆ ಪ್ರತಿ ತಿಂಗಳು ರೂ.250ರಂತೆ ಅಂಗವಿಕಲತೆಯ ಪಿಂಚಣಿ ನಿಗದಿಪಡಿಸಿ ಆಯೋಗ ತೀರ್ಪು ನೀಡಿದೆ.

ಈ ಆದೇಶ ಹೊರಡಿಸಿದ ಒಂದು ತಿಂಗಳ ಒಳಗಾಗಿ 30.04.2000ರಿಂದ 30.09.2023ರವರೆಗೆ ದೂರುದಾರಳಿಗೆ ಬರಬೇಕಿರುವ ಬಾಕಿ ರೂ.70,250 ಮತ್ತು ಅದರ ಮೇಲೆ ಶೇ.10ರಂತೆ ಬಡ್ಡಿ ಲೆಕ್ಕ ಹಾಕಿ ತೀರ್ಪು ನೀಡಿದ ಒಂದು ತಿಂಗಳ ಒಳಗಾಗಿ ದೂರುದಾರಳಿಗೆ ನೀಡುವಂತೆ ತನ್ನ ಆದೇಶದಲ್ಲಿ ತಿಳಿಸಿದೆ. ಜೊತೆಗೆ ದೂರುದಾರಳಿಗೆ ಆಗಿರುವ ಅನಾನುಕೂಲ, ಮಾನಸಿಕ ತೊಂದರೆಗಾಗಿ 20 ಸಾವಿರ ರೂ. ಪರಿಹಾರ ಹಾಗೂ 10 ಸಾವಿರ ರೂ. ಪ್ರಕರಣದ ಖರ್ಚು ವೆಚ್ಚವನ್ನು ಕೊಡಲು ಆಯೋಗ ಆದೇಶಿಸಿದೆ.

## ಮುಂದಿನ ಬಜೆಟ್‌ನಲ್ಲಿ ಹಿರಿಯ ನಾಗರಿಕರಿಗೆ ಪಿಂಚಣಿ ಹೆಚ್ಚಳ : ಸಿಎಂ ಸಿದ್ದರಾಮಯ್ಯ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಿರಿಯ ನಾಗರಿಕರಿಗೆ ನೀಡುತ್ತಿರುವ ಮಾಸಾಶನವನ್ನು ಮುಂದಿನ ಬಜೆಟ್ ನಲ್ಲಿ ಹೆಚ್ಚಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ, ಹಿರಿಯ ನಾಗರಿಕರ ಮಾಸಾಶನ ಹೆಚ್ಚಳಕ್ಕೆ ಮನವಿ ಬಂದಿದ್ದು, ಮುಂದಿನ ಬಜೆಟ್ ನಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಸನ್ಮಾನಿತರಾದ ಪದ್ಮಶ್ರೀ ಪುರಸ್ಕೃತ ಹರೇಕಳ ಹಾಜಪ್ಪ, ಹಿರಿಯ ನ್ಯಾಯವಾದಿ ಪಿ.ಎಸ್. ರಾಜಗೋಪಾಲ್, ಯೋಗಪಟು ಡಿ.ನಾಗರಾಜ್, ಸಂಬಾಳ ವಾದಕ ಹಣಮಂತ ಗೋವಿಂದಪ್ಪ ಹೂಗಾರ, ನಿವೃತ್ತ ಕುಲಪತಿ ಆರ್.ಆರ್. ಹಂಚಿನಾಳ, ಸಮಾಜ ಸೇವಕ ವೀರಭದ್ರಪ್ಪ ಶರಣಪ್ಪ ಉಪ್ಪಿನ, ನಿವೃತ್ತ ಶಿಕ್ಷಕರಾದ ಎಚ್.ಎಸ್. ಗಿರಿರಾಜ್ ಎಲ್ಲರೂ ನಮಗೆ ಮಾದರಿ ಮತ್ತು ಮಾರ್ಗದರ್ಶಕರು. ಇವರ ಬದುಕಿನ ಮೌಲ್ಯಗಳು ಸಮಾಜವನ್ನು ಬೆಳಗುತ್ತವೆ ಎಂದು ಮೆಚ್ಚುಗೆ ಸೂಚಿಸಿದರು.

ಪ್ರತಿಯೊಬ್ಬರೂ ವಿಶ್ವ ಮಾನವರಾಗಿ ಬದುಕಿ, ವಿಶ್ವ ಮಾನವರಾಗಿಯೇ ಇಹಲೋಕ ತ್ಯಜಿಸಬೇಕು ಎಂದು ತಿಳಿಸಿದ ಮುಖ್ಯಮಂತ್ರಿ, ಹಿರಿಯರನ್ನು ಗೌರವದಿಂದ ನಡೆಸಿಕೊಳ್ಳುವುದು ಮತ್ತು ಅವರ ಬದುಕಿನ ಮೌಲ್ಯಗಳನ್ನು ನಾವು ಅಳವಡಿಸಿಕೊಳ್ಳುವುದೇ ಹಿರಿಯರಿಗೆ ನಾವು ನೀಡುವ ಗೌರವ. ನಾವು ನೀವೆಲ್ಲಾ ಎಷ್ಟು ವರ್ಷ ಬದುಕುತ್ತೀವಿ ಎನ್ನುವುದಕ್ಕಿಂತ ಇದ್ದಷ್ಟು ದಿನ ಸಾರ್ಥಕ ಬದುಕು ನಡೆಸುವುದು ಉತ್ತಮ ಎಂದರು. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತಿತರ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

## ಅಶಕ್ತರಿಗೆ ನೆರವು ನೀಡುವುದೇ ನಿಜವಾದ ಧರ್ಮ



ಮನುಷ್ಯನಿಗೆ ಅರ್ಥ ಆಯುಷ್ಯ ಅರಿವು ಬಲು ಮುಖ್ಯ. ಅರಿವು ಇಲ್ಲದ ಜೀವನ ವ್ಯರ್ಥ. ಮುಟ್ಟಬೇಕಾದ ಗುರಿ, ಪಡೆಯಬೇಕಾದ ನೆಮ್ಮದಿ ಸಿಗದಿದ್ದರೆ ಜೀವನದಲ್ಲಿ ಶ್ರೇಯಸ್ಸು ಕಾಣುವುದು ಕಷ್ಟ. ಸ್ವಾರ್ಥ ಸಂಕುಚಿತ ಪ್ರವೃತ್ತಿ ಹೆಚ್ಚುತ್ತಿರುವ ಕಾರಣ ಸಮಾಜದಲ್ಲಿ ಮೌಲ್ಯಗಳು ಕಣ್ಮರೆಯಾಗುತ್ತಿವೆ. ಸಮಷ್ಠಿ ಪ್ರಜ್ಞೆ ಇಲ್ಲದಿರುವುದರಿಂದ ಅಪನಂಬಿಕೆ ಮತ್ತು ಅವಿಶ್ವಾಸಗಳು ಬೆಳೆಯುತ್ತಿವೆ. ಜಗತ್ತಿನಲ್ಲಿ ಯಾವುದೇ ಧರ್ಮ ಇನ್ನೊಬ್ಬರಿಗೆ ಕೇಡು ಮಾಡೆಂದು ಹೇಳಿಲ್ಲ. ಹೇಳುವುದೂ ಇಲ್ಲ. ಹಾಗೇನಾದರೂ ಹೇಳಿದರೆ ಅದು ಧರ್ಮವೆನಿಸದು.

– ಡಾ. ವೀರಸೋಮೇಶ್ವರ ಜಗದ್ಗುರುಗಳು.
ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮನುಷ್ಯ ಕ್ಷಣಿಕ ಸುಖಾಪೇಕ್ಷೆಗಾಗಿ ಶಾಶ್ವತ ಸುಖ ಕಳೆದುಕೊಳ್ಳುತ್ತಿದ್ದಾನೆ. ಸ್ವಹಿತಾಸಕ್ತಿಯುಳ್ಳ ಜನ ಹೆಚ್ಚಾಗುತ್ತಿದ್ದಾರೆ. ಬದುಕಿಗೆ ಆಸರೆಯಿಲ್ಲದ ಅಶಕ್ತರಿಗೆ ನೆರವು ನೀಡುವುದೇ ನಿಜವಾದ ಧರ್ಮ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ನಿಮಿತ್ತ ಸಂಯೋಜಿಸಿದ್ದ ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮ ರಕ್ಷಣೆ ಮತ್ತು ದುಷ್ಟ ಶಕ್ತಿಗಳ ನಿರ್ನಾಮ ಮಾಡಲೆಂದೇ ಪರಶಿವನ ಜಟಾ ಮುಕುಟದಿಂದ ವೀರಭದ್ರಸ್ವಾಮಿ ಅವತರಿಸಿ ಬಂದ. ದುರಹಂಕಾರಿ ದಕ್ಷಬ್ರಹ್ಮನ ಸಂಹರಿಸಿ ಶಿವ ಸಂಸ್ಕೃತಿಯನ್ನು ಹೆಚ್ಚಿಸಿದ ಕೀರ್ತಿ ಶ್ರೀ ವೀರಭದ್ರಸ್ವಾಮಿಗೆ ಸಲ್ಲುತ್ತದೆ.

ಶ್ರೀ ರಂಭಾಪುರಿ ಪೀಠದ ಕ್ಷೇತ್ರನಾಥನಾಗಿ, ಗೋತ್ರಪುರುಷನಾಗಿ ಪೂಜೆಗೊಳ್ಳುವ ವೀರಭದ್ರಸ್ವಾಮಿ ನಾಡಿನ ತುಂಬೆಲ್ಲ ನೆಲೆಗೊಂಡಿದ್ದಾನೆ. ಅವನು ಎಲ್ಲಿಯೇ ಪೂಜೆಗೊಂಡರೂ ಆತನ ಮೂಲ ಶಕ್ತಿ ಕೇಂದ್ರ ರಂಭಾಪುರಿ ಪೀಠದ ವೀರಭದ್ರಸ್ವಾಮಿ ಎಂಬುದನ್ನು ಮರೆಯಲಾಗದು. ಅಖಿಲ ಕರ್ನಾಟಕ ವೀರಶೈವ ಅರ್ಚಕ ಪುರೋಹಿತ ನಿಸ್ವಾರ್ಥ ಸೇವಾ ಸಂಘದ ಸೇವಾ ಸೌಭಾಗ್ಯದಲ್ಲಿ ಮೂಲ ಪೀಠದಲ್ಲಿ ಜಯಂತ್ಯುತ್ಸವ ಜರುಗುತ್ತಿರುವುದು ತಮಗೆ ಅತ್ಯಂತ ಸಂತೋಷವನ್ನು ಉಂಟುಮಾಡಿದೆ ಎಂದರು. ಸಮಾರಂಭವನ್ನು ಉದ್ಘಾಟಿಸಿದ ಮಾಜಿ ಸಂಸದ ಮಂಜುನಾಥ ಕುನ್ನೂರ ಮಾತನಾಡಿ, ಶ್ರೀ ವೀರಭದ್ರಸ್ವಾಮಿ ವೀರಶೈವ ಸಮುದಾಯಕ್ಕಷ್ಟೇ ಸ್ವಾಮಿಯಲ್ಲ. ಇಡೀ ಮನುಕುಲಕ್ಕೆ ಮಹಾಪುರುಷನಾಗಿ ಶಿವ ಸಂಸ್ಕೃತಿ ಹೆಚ್ಚಿಸಿದ್ದನ್ನು ಮರೆಯುವಂತಿಲ್ಲ. ದುಷ್ಟ ಶಕ್ತಿಗಳು ನಿರ್ನಾಮಗೊಂಡು ಸಾತ್ವಿಕ ಶಕ್ತಿ ಬೆಳೆದು ಬರುವ ಅವಶ್ಯಕತೆಯಿದೆ ಎಂದರು.

ಶ್ರೀನಿವಾಸ ಸರಡಗಿಯ ರೇವಣಸಿದ್ಧ ಶಿವಾಚಾರ್ಯರು, ತೊನಸನಹಳ್ಳಿ ಚರಂತೇಶ್ವರಮಠದ ರೇವಣಸಿದ್ಧ ಶಿವಾಚಾರ್ಯರು, ಪಾಲ್ತೂರು ಚನ್ನವೀರ ಶಿವಾಚಾರ್ಯರು, ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಬುಕ್ಕಸಾಗರದ ಕರಿಬಸವೇಶ್ವರ ಶಿವಾಚಾರ್ಯರು, ಅಥನೂರು ಅಭಿನವ ಗುರುಬಸವ ಶಿವಾಚಾರ್ಯರು, ಹಣಮಾಪುರದ ಡಾ.ಸೋಮಶೇಖರ ಶಿವಾಚಾರ್ಯರು, ದೊಡ್ಡಗುಣಿ ರೇವಣಸಿದ್ಧ ಶಿವಾಚಾರ್ಯರು ಪಾಲ್ಗೊಂಡು ಸಮಯೋಚಿತವಾಗಿ ನುಡಿ ನಮನ ಸಲ್ಲಿಸಿದರು. ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ ಹಿರೇಮಠ, ಬೆಂಗಳೂರಿನ ಬಾಳಯ್ಯ ಇಂಡಿಮಠ, ಹೊಳೆನರಸೀಪುರದ ಮಲ್ಲಿಕಾರ್ಜುನಸ್ವಾಮಿ, ಕೂಡ್ಲಗೆರೆ ಹಾಲೇಶ, ಮಹೇಶ್ವರಪ್ಪ, ನಾಗರನವಿಲೆ ಸಿದ್ಧೇಶ್ವರ ಶಾಸ್ತ್ರಿಗಳು ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು. ಪುರೋಹಿತ ಸಂಘದ ಅಧ್ಯಕ್ಷ ಗಣೇಶಕುಮಾರ್ ಮೊದಲ್ಗೊಂಡು ಸಂಘದ ಎಲ್ಲ ಸದಸ್ಯರು ಪಾಲ್ಗೊಂಡಿದ್ದರು. ಮಳಲಿ ಸಂಸ್ಥಾನಮಠದ ಡಾ.ನಾಗಭೂಷಣ ಶಿವಾಚಾರ್ಯರು ಸ್ವಾಗತಿಸಿದರು. ದೇವಾಪುರ ಹಿರೇಮಠದ ಶಿವಮೂರ್ತಿ ಶಿವಾಚಾರ್ಯರು ನಿರೂಪಿಸಿದರು. ಸಮಾರಂಭದಲ್ಲಿ ಪಾಲ್ಗೊಂಡ ಭಕ್ತ ಸಮುದಾಯಕ್ಕೆ ಅನ್ನ ದಾಸೋಹ ನೆರವೇರಿಸಲಾಯಿತು.

ಪ್ರಾತಃಕಾಲ ಶ್ರೀ ಜಗದ್ಗುರು ರೇಣುಕಾಚಾರ್ಯ ಮತ್ತು ಶ್ರೀ ವೀರಭದ್ರಸ್ವಾಮಿಗೆ ಅಲಂಕಾರದೊಂದಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಶ್ರೀ ಸೋಮೇಶ್ವರ ದೇವಸ್ಥಾನದಿಂದ ಶ್ರೀ ವೀರಭದ್ರಸ್ವಾಮಿ ದೇವಸ್ಥಾನದವರೆಗೆ ಶ್ರೀ ವೀರಭದ್ರಸ್ವಾಮಿಯ ಅಲಂಕೃತ ಹೂವಿನ ಪಲ್ಲಕ್ಕಿ ಮಹೋತ್ಸವ ಜರುಗಿತು. ಉತ್ಸವದಲ್ಲಿ ವೀರಗಾಸೆ ಕಲಾವಿದರು ಮತ್ತು ಡೊಳ್ಳು ಕುಣಿತ ಕಲಾವಿದರು ಪಾಲ್ಗೊಂಡು ಮೆರಗು ತುಂಬಿದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ಸರ್ಕಾರದ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದಲ್ಲಿ ಸದಾ ಮುಂದು

# ಬಟ್ಟೂರ ಗ್ರಾ.ಪಂಗೆ 'ಗಾಂಧಿ ಗ್ರಾಮ ಪುರಸ್ಕಾರ'ದ ಗರಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರವಸೂಲಿ, ಎಸ್‌ಸಿ/ಎಸ್‌ಟಿ, ಅಂಗವಿಕಲ ಅನುದಾನದ ಸಂಪೂರ್ಣ ಸದ್ಬಳಕೆ, ಮಕ್ಕಳ ಸ್ನೇಹಿ, ಜನಸ್ನೇಹಿ, ನರೇಗಾ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದಿಂದ ತಾಲೂಕಿನ ಬಟ್ಟೂರ ಗ್ರಾಮ ಪಂಚಾಯಿತಿಗೆ 'ಗಾಂಧಿ ಗ್ರಾಮ ಪುರಸ್ಕಾರ' ಲಭಿಸಿದೆ.

ಶಿಕ್ಷಣ, ಸ್ವಚ್ಛತೆ, ಕುಡಿಯುವ ನೀರು, ಬೆಳಕು, ಗ್ರಾಮ ಸಭೆಗಳ ನಿರ್ವಹಣೆ, ಶೌಚಾಲಯ ನಿರ್ಮಾಣ, ಶಾಲೆ, ಕೆರೆ, ರಸ್ತೆ ಅಭಿವೃದ್ಧಿ, ಚರಂಡಿ ನಿರ್ಮಾಣ ಸೇರಿ ಸರ್ಕಾರದ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದಿಂದ ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿಯ ಉದ್ದೇಶಗಳನ್ವಯ ರೂಪಿಸಿದ ಒಟ್ಟು 150 ಅಂಕಗಳ ಪ್ರಶ್ನಾವಳಿಗೆ ಈ ಗ್ರಾ.ಪಂನಿಂದ ಸಿಕ್ಕ ತೃಪ್ತಿಕರ ಉತ್ತರ ಪ್ರಶಸ್ತಿಗೆ ಕಾರಣವಾಗಿದೆ. ಅ.2ರಂದು ಗಾಂಧಿ ಜಯಂತಿಯ ದಿನ ಬೆಂಗಳೂರಿನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ಪ್ರದಾನವಾಗಲಿದ್ದು, ಈ ಪುರಸ್ಕಾರ 5 ಲಕ್ಷ ರೂ ಚೆಕ್, ಪಾರಿತೋಷಕ ಮತ್ತು ಅಬಿನಂಧನಾ ಪತ್ರ ಹೊಂದಿರುತ್ತದೆ.




ಈ ಪಂಚಾಯಿತಿಯು ಮಾಜಿ ಶಾಸಕ ರಾಮಣ್ಣ ಲಮಾಣಿ ಸ್ವಗ್ರಾಮ ಕುಂದ್ರಳ್ಳಿ ತಾಂಡಾ, ಕುಂದ್ರಳ್ಳಿ, ಶೆಟ್ಟಿಕೇರಿ ಗ್ರಾಮ ಒಳಗೊಂಡಂತೆ ಒಟ್ಟು 14 ಸದಸ್ಯರನ್ನು ಒಳಗೊಂಡಿದೆ. ಒಟ್ಟು 1467 ಕುಟುಂಬಗಳು ಮತ್ತು 5840 ಜನಸಂಖ್ಯೆ ಹೊಂದಿದ್ದು, ಬಹುತೇಕ ಕುಟುಂಬಗಳು ಶೌಚಾಲಯ ಹೊಂದಿವೆ. ನರೇಗಾ ಯೋಜನೆಯಡಿ ಗ್ರಾ.ಪಂ ವ್ಯಾಪ್ತಿಯ ನೊಂದಾಯಿತ ಕೂಲಿಕಾರ್ಮಿಕರಿಗೆ ಸಕಾಲದಲ್ಲಿ ಕೆಲಸ ನೀಡಿ ನಿಗದಿತ ಸಮಯಕ್ಕೆ ಕೂಲಿ ಹಣ ಪಾವತಿಸಿ ಶೇ.100ರಷ್ಟು ಪ್ರಗತಿ ಸಾಧಿಸಿದೆ. ಸ್ವಚ್ಛ ಭಾರತ ಯೋಜನೆಯಡಿ ಸ್ವಚ್ಛತೆ, ಬಯಲು ಬಹಿರ್ದೆಸೆ ಮುಕ್ತ ಗ್ರಾಮವಾಗಿಸಲು ಜನಜಾಗೃತಿ ಮೂಡಿಸುವಲ್ಲಿ ಸ್ಥಳೀಯ ಗ್ರಾ.ಪಂ ಯಶಸ್ವಿಯಾಗಿದೆ. ಕಸ ವಿಲೇವಾರಿ ಘಟಕ ನಿರ್ಮಿಸಿದ್ದು, ಹಸಿ ಕಸ ಮತ್ತು ಒಣ ಕಸ ಸಂಗ್ರಹ, ಬೇರ್ಪಡಿಸುವಿಕೆಗೆ ಸಮರ್ಪಕ ಆನ್‌ಲೈನ್ ಸೇವೆ ನೀಡಲಾಗಿದೆ.

> ನರೇಗಾ ಯೋಜನೆ, 15ನೇ ಹಣಕಾಸು ಮತ್ತು ಅಮೃತ ಪಂಚಾಯಿತಿ ಅನುದಾನದಲ್ಲಿ ಅಗತ್ಯ ಅಭಿವೃದ್ಧಿ ಕಾರ್ಯಗಳೊಂದಿಗೆ, ಶಿಕ್ಷಣಕ್ಕೆ ಬಹಳಷ್ಟು ಒತ್ತು ನೀಡಿರುವುದು ಖುಷಿ ನೀಡಿದೆ. ಗ್ರಾ.ಪಂ ವ್ಯಾಪ್ತಿಯ ಬಟ್ಟೂರು, ಕುಂದ್ರಳ್ಳಿ, ಕುಂದ್ರಳ್ಳಿ ತಾಂಡಾ, ಶೆಟ್ಟಿಕೇರಿ ಗ್ರಾಮಗಳಲ್ಲಿನ ಸದಸ್ಯರೆಲ್ಲರ ಕಳಕಳಿ, ಜನರ, ಅಧಿಕಾರಿಗಳ ಸಹಕಾರದಿಂದ ಕೈಗೊಂಡ ಅಭಿವೃದ್ಧಿ ಕೆಲಸಗಳೇ ಪುರಸ್ಕಾರಕ್ಕೆ ಕಾರಣ. ಈ ಪ್ರಶಸ್ತಿ ಮತ್ತಷ್ಟು ಕೆಲಸ ಮಾಡಲು ಪ್ರೇರಣೆ ನೀಡಿದೆ.
>
> **– ಜಗದೀಶಗೌಡ ಪಾಟೀಲ, ಗ್ರಾ.ಪಂ ಅಧ್ಯಕ್ಷರು.**
>
> ಎಂ.ಆರ್ ಮಾದರ, ಪಿಡಿಓ–ಬಟ್ಟೂರು.

> ಪಂಚಾಯಿತಿ ವ್ಯಾಪ್ತಿಯ ಜನಪ್ರತಿನಿಧಿಗಳು, ಸಿಬ್ಬಂದಿಗಳು ಹಾಗೂ ಜನರ ಸಹಕಾರದಿಂದ ಸರ್ಕಾರದ ಕಾರ್ಯಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಂಡಿವೆ. ಸರ್ಕಾರದ ಅನುದಾನ ಸದ್ಬಳಕೆ ಮತ್ತು ಉದ್ದೇಶ ಈಡೇರಿದೆ. ಎಲ್ಲ ಪಂಚಾಯಿತಿಗಳ ಕಾರ್ಯವೈಖರಿಯನ್ನು ಮತ್ತಷ್ಟು ಕ್ರಿಯಾಶೀಲಗೊಳಿಸುವುದು ಈ ಪ್ರಶಸ್ತಿ ಉದ್ದೇಶವಾಗಿದೆ. ಈ ಪುರಸ್ಕಾರ ಇತರೆಲ್ಲ ಗ್ರಾಮ ಪಂಚಾಯಿತಿಗಳಿಗೂ ಪ್ರೇರಣೆ.
>
> **– ಕೃಷ್ಣಪ್ಪ ಧರ್ಮರ.**
>
> ತಾ.ಪಂ ಇಓ, ಲಕ್ಷ್ಮೇಶ್ವರ.

ಅಮೃತ ಗ್ರಾ.ಪಂಗೆ ಆಯ್ಕೆ: ಸುವರ್ಣ ಮಹೋತ್ಸವ ಅಂಗವಾಗಿ ಬಟ್ಟೂರು ಅಮೃತ ಪಂಚಾಯಿತಿಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ಬಂದಿರುವ 25 ಲಕ್ಷ ರೂ. ವಿಶೇಷ ಅನುದಾನದಲ್ಲಿ ವ್ಯಾಪ್ತಿಯ ಎಲ್ಲ ಅಂಗನವಾಡಿ, ಶಾಲೆಗಳಲ್ಲಿ ಶೌಚಾಲಯ, ಶುದ್ಧ ಕುಡಿಯುವ ನೀರು, ಪಾಠೋಪಕರಣ, ಫರ್ನಿಚರ್, ಅಗತ್ಯ ಮತ್ತು ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಗದಗ ಜಿಲ್ಲೆಯಲ್ಲಿಯೇ ವಿಶೇಷ ಎನ್ನುವಂತೆ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ಶಿಕ್ಷಣಕ್ಕಾಗಿ 1.5 ಲಕ್ಷ ರೂ. ವೆಚ್ಚದಲ್ಲಿ ಡಿಜಿಟಲ್ ಇಂಟರ್‍ಯಾಕ್ಟಿವ್ ಬೋರ್ಡ್, ಪಿಂಕ್ ಶೌಚಾಲಯ, ವಾಲಿಬಾಲ್, ಕಬಡ್ಡಿ, ಖೋಖೋ ಗ್ರೌಂಡ್ ನಿರ್ಮಿಸಲಾಗಿದೆ. ಡಿಜಿಟಲ್ ಗ್ರಂಥಾಲಯ, ಸ್ವಸಹಾಯ ಸಂಘಕ್ಕೆ ಶೆಡ್ ನಿರ್ಮಾಣ ಗ್ರಾ.ಪಂನ ವಿಶೇಷ ಕಾರ್ಯಗಳಾಗಿವೆ.




## ಸ್ವಚ್ಛತೆಯಿಂದಲೇ ಆರೋಗ್ಯ

■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ನಾವು ವಾಸಿಸುವ ವಾತಾವರಣ ಸ್ವಚ್ಛವಾಗಿದ್ದರೆ ಮಾತ್ರ ನಮಗೆ ಆರೋಗ್ಯ ಭಾಗ್ಯ ದೊರೆಯುವುದು ಎಂದು ಶೋಭಾ ಪಾಟೀಲ್ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಹೆಣ್ಣು ಮಕ್ಕಳ ಶಾಲೆಯ ಆವರಣವನ್ನು ಗಾಂಧಿ ಜಯಂತಿ ಅಂಗವಾಗಿ ಶಿಕ್ಷಕ ವೃಂದ ಹಾಗೂ ಮಕ್ಕಳು ಹಮ್ಮಿಕೊಂಡಿದ್ದ ಸ್ವಚ್ಛತಾ ಅಭಿಯಾನದಲ್ಲಿ ಶಾಲೆಯ ಆವರಣವನ್ನು ಸ್ವಚ್ಛಗೊಳಿಸುವ ಕಾರ್ಯದಲ್ಲಿ ಪಾಲ್ಗೊಂಡು ಮಾತನಾಡಿದರು.

ಶಾಲೆಗಳು ಸ್ವಚ್ಛವಾಗಿದ್ದರೆ ಮಕ್ಕಳು ಆರೋಗ್ಯವಾಗಿ, ಸದೃಢರಾಗಿ ಇರಲು ಸಾಧ್ಯವಾಗುತ್ತದೆ. ಹೀಗಾಗಿ, ಮಕ್ಕಳ ಕಲಿಕೆಗೆ ಸ್ವಚ್ಛತೆ ಬಹಳ ಮುಖ್ಯವಾಗಿದೆ.

ಮಕ್ಕಳಲ್ಲಿ ಈ ಹಂತದದ್ದೇ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಲು ಸ್ವಚ್ಛತಾ ಅಭಿಯಾನ ತುಂಬಾ ಸಹಕಾರಿಯಾಗಿದ್ದು, ಮನೆಯ ಸುತ್ತ ಮುತ್ತಲು ಸ್ವಚ್ಛತೆಯಿಂದ ಇಟ್ಟುಕೊಂಡರೆ ಕುಟುಂಬದ ಆರೋಗ್ಯ ಹಾಗೂ ಸಮುದಾಯದ ಆರೋಗ್ಯ ಹೆಚ್ಚಿಸಲು ಸಹಕಾರಿಯಾಗುವುದು ಎಂದರು.

ಎಸ್.ಪಿ ಸರ್ವದೆ, ವಿ.ವಾಯ್ ನವಲೆ, ಪಿ.ಎಸ್ ಮರಿದೇವರಮಠ, ಆರ್.ಎಂ ರೋಣದ, ಕೆ.ಎಸ್ ಗಾಣಿಗೇರ, ಮೈತ್ರಾ ಕೊಂಡಿಕೊಪ್ಪ ಸೇರಿದಂತೆ ಶಾಲಾ ಮಕ್ಕಳು ಇದ್ದರು.



## ವಿದ್ಯಾರ್ಥಿಗಳಿಗೆ ಲೇಖನ ಸಾಮಗ್ರಿ ವಿತರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಹೊಂಬಳ ರಸ್ತೆಯ ಜನತಾ ಕಾಲೋನಿಯ ಯುವಕರು ಹಜರತ್ ಬಿಲಾಲ್ ಮಸ್ಜೀದ್ ಮುಸ್ಲಿಂ ಜಮಾತ್‌ನೊಂದಿಗೆ ಈದ್ ಮಿಲಾದ್ ಕಾರ್ಯಕ್ರಮವನ್ನು ನೆರವೇರಿಸಿ, ಶಾಲಾ ಹಾಗೂ ಮದರಸಾ ಮಕ್ಕಳಿಗೆ ನೋಟ್ ಪುಸ್ತಕ ಹಾಗೂ ಪೆನ್ ವಿತರಿಸಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಮೌಲಾನಾ ಅಸ್ಲಮ್ ಅಮೀನಬಾವಿಯವರು ವಹಿಸಿಕೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಜರತ್ ಬಿಲಾಲ್ ಮಸ್ಜೀದ್ ಚೇರಮನ್ ಮೆಹಬೂಬಅಲಿ ಎಚ್.ಬಳ್ಳಾರಿಯವರು ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾದ ಬಿಲಾಲ್ ಮಸ್ಜೀದಿನ ಕಾರ್ಯದರ್ಶಿ, ರಶೀದಸಾಬ ಎ.ಗೋಕಾವಿಯವರು ಪ್ರವಾದಿ ಪೈಗಂಬರರ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಮೌಲಾನಾರವರು ಈದ್ ಮಿಲಾದ್ ವಿಶೇಷತೆಯನ್ನು ಮತ್ತು ಪೈಗಂಬರರ ಜೀವನ ನಡೆ, ನುಡಿಗಳ ಬಗ್ಗೆ ಸಮಗ್ರವಾಗಿ ತಿಳಿಸಿದರು. ಮಸ್ತಾನಅಲಿ ಎಮ್.ಶಿರಹಟ್ಟಿ ನಿರೂಪಿಸಿದರು. ಹಾಜಿಅಲಿ ಎಚ್.ಕೊಪ್ಪಳ ವಂದಿಸಿದರು. ಕಾರ್ಯಕ್ರಮದಲ್ಲಿ ಓಣಿಯ ಯುವಕರು, ಜಮಾತಿನ ಸರ್ವ ಸದಸ್ಯರು ಹಾಗೂ ಓಣಿಯ ಎಲ್ಲ ಗುರು–ಹಿರಿಯರು ಭಾಗವಹಿಸಿದ್ದರು.

### 'ಪುಲಿಗೆರೆ ಪೂರ್ಣಿಮೆ' ಕಾರ್ಯಕ್ರಮದಲ್ಲಿ ರೇಖಾ ವಡಕಣ್ಣವರ ಅಭಿಪ್ರಾಯ

## ಜೀವನದ ರಥಕ್ಕೆ ಗಂಡ-ಹೆಂಡತಿ ಎರಡು ಗಾಲಿಗಳಿದ್ದಂತೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜದಲ್ಲಿ ಗಂಡ–ಹೆಂಡತಿ ಎನ್ನುವ ಎರಡು ಗಾಲಿಗಳಿಂದ ಜೀವನದ ರಥ ಸರಾಗವಾಗಿ ಚಲಿಸಲು ಸಾಧ್ಯವಾಗುತ್ತದೆ. ಜೀವನದಲ್ಲಿ ಕಷ್ಟ, ನೋವು–ನಲಿವುಗಳನ್ನು ಇಬ್ಬರು ಸಮಾನವಾಗಿ ಸ್ವೀಕರಿಸಿ ಜೀವನ ಸಾಗಿಸಬೇಕು. ಅಂದಾಗಲೇ ಸಂಸಾರ ಚೆನ್ನಾಗಿ ನಡೆಯುತ್ತದೆ ಎಂದು ರೇಖಾ ವಡಕಣ್ಣವರ ಅಭಿಪ್ರಾಯಪಟ್ಟರು.

ಅವರು ಶನಿವಾರ ಪಟ್ಟಣದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಪ್ರತಿ ತಿಂಗಳು ಹುಣ್ಣಿಮೆಯ ದಿನದಂದು ಹಮ್ಮಿಕೊಳ್ಳುವ 'ಪುಲಿಗೆರೆ ಪೂರ್ಣಿಮೆ' ಕಾರ್ಯಕ್ರಮ ಸರಣಿಯ 22ನೇ ಸಂಚಿಕೆಯಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಸತಿ–ಪತಿಗಳೊಂದಾದ ಭಕ್ತಿ ದೇವರಿಗೆ ಪ್ರೀತಿ. ಇರುವ ಕಣ್ಣು ಎರಡಾದರೂ ನೋಡುವ ನೋಟ ಒಂದೇ ಎಂಬಂತೆ ಗಂಡ–ಹೆಂಡತಿಯರು ಇಬ್ಬರು ಒಬ್ಬರಾಗಿ ಜೀವನ ರಥ ಸಾಗಿಸುವುದೇ ನಿಜವಾದ ದಾಂಪತ್ಯ ಧರ್ಮ. ಅದನ್ನೇ ಬಸವಾದಿ ಶಿವಶರಣರು ನಮಗೆ ತಾವು ಆಚರಿಸುವದರ ಮೂಲಕ ತಿಳಿಸಿಕೊಟ್ಟರು ಎಂದು ಹೇಳಿದರು.




> ಅಧ್ಯಕ್ಷತೆ ವಹಿಸಿದ್ದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಪ್ರತಿ ತಿಂಗಳು ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಟ್ರಸ್ಟ್ ಕಮಿಟಿಯು ಉನ್ನತ ಪರಂಪರೆಯನ್ನು ಉಳಿಸಿಕೊಂಡು, ಮುಂದಿನ ತಲೆಮಾರಿಗೆ ದಾಟಿಸುವ ಪವಿತ್ರ ಕಾರ್ಯ ಮಾಡುತ್ತಿದೆ ಎಂದರು.

ಹಿರಿಯರಾದ ಶ್ರೀ ಗಂಗಾಧರಯ್ಯ ಹಾಲೇವಾಡಿಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಎಂ.ಕೆ ಕಳ್ಳಿಮಠ, ಸೋಮಣ್ಣ ಅಣ್ಣಿಗೇರಿ, ವಿಶ್ವನಾಥ ಕರಾಟೆ, ಬಸವರಾಜ ಪುಟಾಣಿ ಮಾತನಾಡಿದರು. ಮಾಗಡಿ ಗ್ರಾಮದ ನಾಗರಾಜ ತೋಟದ ಭಕ್ತಿ ಸೇವೆಗೈದರು.

ಕಾರ್ಯಕ್ರಮದಲ್ಲಿ ಹಿರಿಯರಾದ ಡಿ.ಬಿ ಬಳಿಗಾರ, ಪುರಸಭಾ ಸದಸ್ಯರಾದ ಮಹೇಶ ಹೊಗೆಸೊಪ್ಪಿನ, ಪೂರ್ಣಾಜಿ ಖರಾಟೆ, ನೀಲಪ್ಪ ಕರ್ಜಕಣ್ಣವರ, ಸುರೇಶ ರಾಚನಾಯ್ಕರ, ಎಸ್.ಎಫ್ ಆದಿ, ಗೋಪಾಲ ನಾಯಕ, ಎನ್.ಆರ್ ಸಾತಪುತೆ, ಗೀತಾದೇವಿ ಮಾನ್ವಿ, ಜ್ಯೋತಿ ಚೌಕನವರ, ಪಾರ್ವತಿ ಕಳ್ಳಿಮಠ, ಸೋಮಶೇಖರ ಕೆರಿಮನಿ, ನಾಗರಾಜ ಕಳಸಾಪುರ, ಚಂದ್ರು ನೇಕಾರ, ಸಾತಣ್ಣವರ, ಜಯಪ್ರಕಾಶ ಹೊಟ್ಟಿ ಮುಂತಾದವರಿದ್ದರು.

ಕಾರ್ಯದರ್ಶಿ ಈಶ್ವರ ಮೆಡ್ಲೇರಿ ಸ್ವಾಗತಿಸಿದರು. ಸಂಚಾಲಕ ಜಿ.ಎಸ್ ಗುಡಗೇರಿ ಕಾರ್ಯಕ್ರಮ ನಿರ್ವಹಿಸಿದರು. ಸೃಷ್ಟಿ ಹೊಟ್ಟಿ ಪ್ರಾರ್ಥಿಸಿದಳು. ಸ್ನೇಹಾ ಹೊಟ್ಟಿ ನಿರೂಪಿಸಿದರು. ಸತೀಶ ಬೋಮಲೆ ವಂದಿಸಿದರು.

## ಹಜರತ್ ಮುಹಮ್ಮದ್ ಪೈಗಂಬರ್ ಅವರ ಜಯಂತಿ ಅಂಗವಾಗಿ ಗದಗ ನಗರದಲ್ಲಿ ಮುಸ್ಲಿಂ ಬಾಂಧವರು ನಡೆಸಿದ ಮೆರವಣಿಗೆಯ ವಿವಿಧ ದೃಶ್ಯಗಳು









VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka


ವಾರ್ತಾ ಮತ್ತು ಸಾರ್ವಜನಿಕ
ಸಂಪರ್ಕ ಇಲಾಖೆ
ಬೆಳಕಿನೆಡೆಗೆ...
ಮಹಾತ್ಮ ಗಾಂಧಿಯವರ
154ನೇ
ಜನ್ಮದಿನಾಚರಣೆಯ
ಶುಭಾಶಯಗಳು
ಗಾಂಧೀಜಿ ಕನಸು
ಕರ್ನಾಟಕದಲ್ಲಿ ನನಸು
ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ನುಡಿದಂತೆ ನಡೆದಿದ್ದೇವೆ...
ಶಕ್ತಿ
ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಗೃಹ ಜ್ಯೋತಿ
ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು 10 kg 5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000
ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ | ₹1500 ಡಿಪ್ಲೊಮಾ ಪದವೀಧರರಿಗೆ
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka
https://dipr.karnataka.gov.in/
ಕರ್ನಾಟಕ ವಾರ್ತೆ